ಶ್ರೀ ಜಿ. ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, ಮಾನ್ಯ ಶಾಸಕ ಮಿತ್ರರಾದ ಶ್ರೀ ಕೆ.ಎಸ್. ಪುಟ್ಟಣ್ಣಯ್ಯನವರು ಕೇಳಿದ ಪ್ರಶ್ನೆಗೆ ಉತ್ತರವನ್ನು ಕೊಟ್ಟಿರುವುದರಲ್ಲಿ ಸ್ವಲ್ಪ ಬದಲಾವಣೆಯನ್ನು ಮಾಡಬೇಕಾಗಿದೆ. ಪಾಂಡವಪುರ ಕ್ಷೇತ್ರದಲ್ಲಿರತಕ್ಕಂತಹ ಒಟ್ಟು ಪ್ರಾಥಮಿಕಶಾಲೆಯ ಶಿಕ್ಷಕರ ಮತ್ತು ಮಕ್ಕಳ ಸಂಖ್ಯೆ ಎಷ್ಟು ಎಂದು ಮಾನ್ಯ ಸದಸ್ಯರು ಪ್ರಶ್ನೆಯನ್ನೇ ಕೇಳಿದ್ದಾರೆ. ಉತ್ತರವನ್ನು ಮಾನ್ಯ ಸದಸ್ಯರಿಗೆ ಕಳುಹಿಸಿದ್ದರಲ್ಲಿ ಸ್ವಲ್ಪ ವ್ಯತ್ಯಾಸವಾಗಿದೆ ಸರಿಯಾದುದು ಈ ರೀತಿಯಾಗಿದೆ. " ಪಾಂಡುಪುರ ಕ್ಷೇತ್ರದಲ್ಲಿ ಒಟ್ಟು 205 ಪ್ರಾಥಮಿಕ ಪಾಠಶಾಲೆಗಳು ಇದ್ದು ಒಟ್ಟು 756 ಶಿಕ್ಷಕರು ಕರ್ತವ್ಯವನ್ನು ನಿರ್ವಹಿಸುತ್ತಿದ್ದು ಈ ಶಾಲೆಗಳಲ್ಲಿ ಒಟ್ಟು, 27.832 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ"

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ಪಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, 11ನೇ ಪಟ್ಟಿಯಲ್ಲಿರುವ ಲಿಖಿತ ಮೂಲಕ ಉತ್ತರಿಸುವ 25 ಪ್ರಶ್ನೆಗಳ ಪೈಕಿ 19 ಪ್ರಶ್ನೆಗಳಿಗೆ ಉತ್ತರವನ್ನು ಸದನ ಮುಂದೆ ಮಂಡಿಸುತ್ತೇನೆ.

ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶ ಕೋರಿಕೆ

736 - ಶ್ರೀ ಅಮರೇಗೌಡ ಪಾಟೀಲ್ (ಲಿಂಗಸೂರು) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1990-91 ರಿಂದ 1995ರವರೆಗೆ ವೈದ್ಯಕೀಯ ಶಿಕ್ಷಣಾರ್ಥಿಗಳಿಗೆ ಪ್ರವೇಶ ಕೋರ್ಸಗಳಿಗೆ ನೀಡಿದ ಒಟ್ಟು ಪ್ರವೇಶ ಎಷ್ಟು?*

ಆ) *ವಿಭಾಗವಾರು ವಿದ್ಯಾರ್ಥಿಗಳು ಎಷ್ಟು ಪ್ರವೇಶ ಕಲ್ಪಿಸಲಾಗಿದೆ.*

ಇ) *ಹಿಂದುಳಿದ ಪ್ರದೇಶವಾದ ಗುಲ್ಬರ್ಗಾ ಬೆಳಗಾಂ ವಿಭಾಗದ ವಿದ್ಯಾರ್ಥಿಗಳಿಗೆ ವಿಶೇಷ ಆದ್ಯತೆಯಲ್ಲಿ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದಯೇ?*

ಈ) *ಹಾಕಿದ್ದಲ್ಲಿ, ಈ ಬಗ್ಗೆ ಸರ್ಕಾರ ಇಲ್ಲಿಯವರೆಗೂ ಕೈಗೊಂಡ ಕ್ರಮವೇನು?*

ಶ್ರೀ ವಿ.ಜಿ. ಪಾಟೀಲ್ (ವೈದ್ಯಕೀಯ ಶಿಕ್ಷಣ ನಿರ್ದೇಶಕರು) :

ಅ)

1991-92	3105
1992-93	3345
1993-94	3335